# ಡಾ.ಸುಭಾಷ್ ಸಿ.ಯರಗಲ್ ಎನ್ಐಟಿಕೆ ಡಿಡಿ

**ಮಂಗಳೂರು:** ಸುರತ್ಕಲ್ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕರ್ನಾಟಕ (ಎನ್ಐಟಿಕೆ)ದ ಉಪ ನಿರ್ದೇಶಕರಾಗಿ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕ



ಡಾ.ಸುಭಾಷ್ ಸಿ.ಯರಗಲ್ ಅಧಿಕಾರ ವಹಿಸಿಕೊಂಡಿದ್ದಾರೆ. ಸುರತ್ಕಲ್ ಎನ್ಐಟಿಕೆಗೆ 1996ರಲ್ಲಿ ಸೇರಿದ ಡಾ.ಯರಗಲ್ ಅವರು ಸಂಸ್ಥೆಯ ಬೆಳವಣಿಗೆ ಮತ್ತು ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಅವರು ಆಡಳಿತ ಮಂಡಳಿ ಸದಸ್ಯ, ಡೀನ್ (ಯೋಜನೆ ಮತ್ತು ಅಭಿವೃದ್ಧಿ) ಮತ್ತು ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಸಹಿತ ಹಲವಾರು ಪ್ರಮುಖ ಆಡಳಿತಾತ್ಮಕ ಹುದ್ದೆಗಳನ್ನು ನಿರ್ವಹಿಸಿದ್ದಾರೆ. 1987ರಲ್ಲಿ ಸುರತ್ಕಲ್ ಎನ್ಐಟಿಕೆಯಿಂದ ಸಿವಿಲ್ ಇಂಜಿನಿಯರಿಂಗ್‌ನಲ್ಲಿ ಪದವಿ, ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್‌ನಿಂದ ಸ್ನಾತಕೋತ್ತರ ಮತ್ತು ಡಾಕ್ಟರೇಟ್ ಪದವಿ ಪಡೆದಿದ್ದಾರೆ.

Vijayavani, Date:20/09/24, p, no -03